**5 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯ, ಮಂಡ್ಯ.**

**ಎಸ್ ಸಿ ಕೇಸ್ ನಂ.78/2019**

ಪ್ರಾ.ಸಾ. 13

ಚಾ.ಸಾ. 9

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಿದ ದಿನಾಂಕ 23.12.2024**

| | |
|---|---|
| ಸಾಕ್ಷಿದಾರರ ಹೆಸರು | ಎನ್.ಎಸ್.ಸಿದ್ದೇಗೌಡ |
| ತಂದೆಯ ಹೆಸರು | ದತ್ತನಸಿದ್ದೇಗೌಡ |
| ವಯಸ್ಸು | 53 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸ | ನೆಲಮಾಕನಹಳ್ಳಿ ಗ್ರಾಮ |

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರವರಿಂದಃ**

1. ಸುಮಾರು 5-6 ವರ್ಷದ ಹಿಂದೆ ನೆಲಮಾಕನಹಳ್ಳಿ ಹೊಟೇಲ್ ನಲ್ಲಿ ಇದ್ದಾಗ ನಿಪಿ.4 ಕ್ಕೆ ನನ್ನ ಸಹಿ ಪಡೆದುಕೊಂಡಿದ್ದು, ಯಾವ ವಿಚಾರಕ್ಕಾಗಿ ಮಹಜರ್ ಮಾಡಿದ್ದರು ಎಂದು ನನಗೆ ತಿಳಿದಿಲ್ಲ. ಪೊಲೀಸರು ನನ್ನನ್ನು ಯಾವುದೇ ಸ್ಥಳಕ್ಕೆ ಕರೆದುಕೊಂಡು ಹೋಗಿ ನನ್ನ ಸಮಕ್ಷಮ ಮಹಜರ್ ಮಾಡಿ ಯಾವುದೇ ವಸ್ತುವನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಪೊಲೀಸರ ಕೋರಿಕೆ ಮೇರೆಗೆ ಸಹಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ತಿಳಿದಿಲ್ಲ. ನನ್ನೊಂದಿಗೆ ಬೇರೆ ಯಾರು ಸಹಿ ಮಾಡಿರುತ್ತಾರೆ ಗೊತ್ತಿಲ್ಲ. ನ್ಯಾಯಾಲಯದ ಮುಂದಿರುವ ನಿಪಿ.5 ಹಾಗೂ 6 ಅನ್ನು ಹಿಂದೆ ನಾನು ನೋಡಿಲ್ಲ. ಪ್ರಕರಣದ ಬಗ್ಗೆ ಬೇರೆ ಮಾಹಿತಿ ಇಲ್ಲ. ಚಾಸಾ.1 ರವರು ಯಾರು ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಗಣಿಸಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಗಿದೆ.)

ಪಾಟೀ ಸವಾಲುಃ ಮಾನ್ಯ ಸರ್ಕಾರಿ ಅಭಿಯೋಜಕರವರಿಂದಃ

2. ದಿನಾಂಕ 17.12.2016 ರಂದು ಪೊಲೀಸರು ನನ್ನನ್ನು ಹಾಗೂ ಚಾಸಾ.10 ಇವರನ್ನು ಮಳವಳ್ಳಿ ಸಿಪಿಐ ಕಛೇರಿಗೆ ಕರೆಯಿಸಿ ಚಾಸಾ.1 ರವರು ನಿಪಿ.5 ಲಗ್ನಪತ್ರಿಕೆ ಹಾಗೂ ನಿಪಿ.6 ಫೋಟೋಗಳನ್ನು ಹಾಜರುಪಡಿಸಿದಾಗ ಪೊಲೀಸರು ಮುಂದಿನ ತನಿಖೆಗಾಗಿ ಅಮಾನತ್ತು ಪಡಿಸಿಕೊಂಡು ನಿಪಿ.4 ರಂತೆ ಮಧ್ಯಾಹ್ನ 12.15 ರಿಂದ 1.00 ಗಂಟೆವರೆಗೆ ಮಾಡಿ ಬರೆದು ಓದಿ ಹೇಳಿದಾಗ ಸರಿ ಇದೆ ಎಂದು ಸಹಿ ಮಾಡಿದ್ದೇನೆ ಎಂದರೆ ಸರಿ.

3. ಮಹಜರಿನ ಎಲ್ಲಾ ವಿಷಯ ತಿಳಿದಿದ್ದರೂ ಕೂಡ ನ್ಯಾಯಾಲಯದ ಮುಂದಿರುವ ನಿಪಿ.5 ಹಾಗೂ ನಿಪಿ.6 ಅನ್ನು ನನ್ನ ಸಮಕ್ಷಮ ಅಮಾನತ್ತುಪಡಿಸಿಕೊಂಡಿದ್ದರೂ ಕೂಡ ಆರೋಪಿತರು ನಮ್ಮ ಊರಿನವರೇ ಆದ್ದರಿಂದ ಸದರಿಯವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ**

ಪಾಟೀ ಸವಾಲು ಇಲ್ಲ ಎಂದಿರುತ್ತಾರೆ.

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಿದೆ.)

ಓ.ಹೇ.ಕೇ.ಸ.ಒ.

(ನಿರ್ಮಲ ಕೆ.)

C/c 5 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ಮಂಡ್ಯ.